# ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1506

2] ಮಾನ್ಯ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ)

3] ಉತ್ತರಿಸುವ ದಿನಾಂಕ : 20/03/2025

4] ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ಕೆ.ಎಸ್.ಐ.ಎಸ್.ಎಫ್ ಘಟಕವನ್ನು (ಬೆಟಾಲಿಯನ್) ಸೃಜಿಸುವ ಯಾವುದಾದರು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: | ಇಲ್ಲ. |
| ಆ) | ಈ ಹಿಂದೆ 2019-20ರಲ್ಲಿ ಮಾನ್ಯ ಡಿಜಿ ಮತ್ತು ಐಜಿಪಿರವರು ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕವಾಗಿ ಘಟಕವನ್ನು ಸೃಜಿಸುವ ಪ್ರಸ್ತಾವನೆಯನ್ನು ನೀಡಿದ್ದರೂ ಕೂಡ ಇದನ್ನು ಪರಿಗಣನೆಗೆ ತೆಗೆದುಕೊಳ್ಳದೇ ಇತ್ತೀಚೆಗಷ್ಟೆ ಮೈಸೂರು ಜಿಲ್ಲೆಗೆ ಈ ಘಟಕವನ್ನು ಸ್ಥಾಪಿಸುವ ಪ್ರಸ್ತಾವನೆಯು 2023-2024ರಲ್ಲಿ ಸಲ್ಲಿಸಿರುವುದನ್ನು ಪರಿಗಣಿಸಲು ಕಾರಣವೇನು: | ಈ ಹಿಂದೆ 2019-20ರಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಕೆ.ಎಸ್.ಐ.ಎಸ್.ಎಫ್ ಘಟಕವನ್ನು ಸೃಜಿಸುವ ಪ್ರಸ್ತಾವನೆಯನ್ನು ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಪರಿಗಣಿಸಿರುವುದಿಲ್ಲ.<br><br>ಮೈಸೂರು ವಲಯದ ಸುತ್ತ-ಮುತ್ತಲಿನ ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ, ಕೊಡಗು ಜಿಲ್ಲೆಗಳಲ್ಲಿ ವಿವಿಧ ಸೂಕ್ಷ್ಮ ಸ್ಥಾವರಗಳಿಗೆ ಭದ್ರತೆ ಒದಗಿಸಲು ಮೈಸೂರು ಭಾಗದಲ್ಲಿ ಕೆ.ಎಸ್.ಐ.ಎಸ್.ಎಫ್ ಬೆಟಾಲಿಯನ್ ಸೃಜಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿದೆ. |
| ಇ) | ಪ್ರತ್ಯೇಕ ಘಟಕದ ಕೊರತೆಯಿಂದಾಗಿ ಈ ಕಲ್ಯಾಣ ಕರ್ನಾಟಕ ಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮುಂಬಡ್ತಿಯಲ್ಲಿ ಅನ್ಯಾಯವಾಗುತ್ತಿದ್ದು ಈ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಯಾವ ಕಾಲಮಿತಿಯಲ್ಲಿ ಪ್ರತ್ಯೇಕ ಕೆ.ಎಸ್.ಐ.ಎಸ್.ಎಫ್ ಘಟಕವನ್ನು ಸ್ಥಾಪಿಸಲಾಗುವುದೇ? | ಮೇಲೆ 'ಅ' ರಲ್ಲಿ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಹೆಚ್‌ಡಿ 53 ಪಿಓಪಿ 2025**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು.